# ಪ್ರಮುಖ ಸಚಿವರ ಖಾತೆ ಬದಲು?

ಬೆಂಗಳೂರು: ಸಂಪುಟ ವಿಸ್ತರಣೆಯ ಜೊತೆಗೆ ಮುಖ್ಯಮಂತ್ರಿ ಕೆಲವು ಪ್ರಮುಖ ಖಾತೆಗಳನ್ನು ಬದಲಾಯಿಸುವ ಆಲೋಚನೆ ಹೊಂದಿದ್ದಾರೆ ಎಂದು ಹೇಳಲಾಗುತ್ತಿದೆ. ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಗೃಹ ಇಲಾಖೆ ಬದಲು ಜಲ ಸಂಪನ್ಮೂಲ ಇಲಾಖೆಗೆ ಬೇಡಿಕೆ ಇಟ್ಟಿದ್ದಾರೆ ಎನ್ನಲಾಗುತ್ತಿದೆ. ಆದರೆ, ಸಿಎಂ ರಮೇಶ್ ಜಾರಕಿಹೊಳಿಗೆ ಪಕ್ಷ ಸೇರ್ಪಡೆ ಸಂದರ್ಭದಲ್ಲಿಯೇ ಜಲ ಸಂಪನ್ಮೂಲ ಇಲಾಖೆ ನೀಡುವ ಭರವಸೆ ಮೇಲೆ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡಿದ್ದರಿಂದ ಬಸವರಾಜ್ ಬೊಮ್ಮಾಯಿ ಅವರಿಗೆ ಗೃಹ ಇಲಾಖೆ ಬದಲಿಸಿದರೆ, ಕಂದಾಯ ಇಲಾಖೆ ನೀಡುವ ಆಲೋಚನೆ ಹೊಂದಿದ್ದಾರೆ ಎನ್ನಲಾಗುತ್ತಿದೆ.

ಕಂದಾಯ ಸಚಿವ ಅಶೋಕ್‌ಗೆ ಗೃಹ ಇಲಾಖೆ ನೀಡುವ ಆಲೋಚನೆ ಹೊಂದಿದ್ದಾರೆ ಎನ್ನಲಾಗುತ್ತಿದೆ. ಆದರೆ, ಅವರು ಬೆಂಗಳೂರು ನಗರಾಭಿವೃದ್ಧಿಗೆ ಬೇಡಿಕೆ ಇಟ್ಟಿದ್ದಾರೆ ಎನ್ನಲಾಗುತ್ತಿದೆ. ಮುನಿರತ್ನ ಕೂಡ ಬೆಂಗಳೂರು ನಗರಾಭಿವೃದ್ಧಿ ಇಲಾಖೆ ನೀಡುವಂತೆ ಒತ್ತಡ ಹೇರುತ್ತಿದ್ದಾರೆ ಎನ್ನಲಾಗುತ್ತಿದ್ದು ಮುನಿರತ್ನಗೆ ಬೆಂಗಳೂರು ಅಭಿವೃದ್ಧಿಯಂತಹ ದೊಡ್ಡ ಖಾತೆ ನೀಡಬಾರದು ಎಂದು ಆರ್. ಅಶೋಕ್ ಹಾಗೂ ಡಾ. ಅಶ್ವತ್ಥ್ ನಾರಾಯಣ ಸಿಎಂಗೆ ಒತ್ತಡ ಹೇರುತ್ತಿದ್ದಾರೆ ಎಂದು ತಿಳಿದು ಬಂದಿದೆ.

ಇನ್ನು ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಅವರಿಗೆ ಇಂಧನ ಖಾತೆ ನೀಡುವ ಬಗ್ಗೆ ಸಿಎಂ ಒಲವು ಹೊಂದಿದ್ದಾರೆ ಎನ್ನಲಾಗಿದ್ದು ಅವರ ಬಳಿ ಇರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯನ್ನು ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರಿಗೆ ನೀಡುವ ಆಲೋಚನೆ ಹೊಂದಿದ್ದಾರೆ ಎನ್ನಲಾಗುತ್ತಿದೆ. ಕೈಗಾರಿಕಾ ಖಾತೆಯನ್ನು ಹೊಸದಾಗಿ ಸಂಪುಟ ಸೇರುವವರಲ್ಲಿ ಯಾರಿಗಾದರೂ ಕೊಡಬೇಕು ಎನ್ನುವ ಲೆಕ್ಕಾಚಾರ ಇಟ್ಟುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ.

ಸಂಪುಟ ವಿಸ್ತರಣೆಯ ನಂತರ ಡಾ. ಸುಧಾಕರ್ ಬಳಿ ಇರುವ ವೈದ್ಯಕೀಯ ಶಿಕ್ಷಣ ಖಾತೆ ಹಾಗೂ ಶಿವರಾಮ್ ಹೆಬ್ಬಾರ್ ಬಳಿ ಇರುವ ಸಕ್ಕರೆ ಖಾತೆಯನ್ನು ವಾಪಸ್ ಪಡೆದು ನೂತನ ಸಚಿವರಿಗೆ ಹಂಚಿಕೆ ಮಾಡಲು ಮುಖ್ಯಮಂತ್ರಿ ಚಿಂತನೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

## 7 ಕುರ್ಚಿ, 20 ಕರ್ಚೀಫ್

1ನೇ ಪುಟದಿಂದ ▶ ಈ ನಡುವೆ ತಮಗೂ ಅವಕಾಶ ದೊರೆತರೆ ಉತ್ತಮ ಕೆಲಸ ಮಾಡುವುದಾಗಿ ಶಾಸಕರಾದ ಎಸ್.ಎ. ರಾಮದಾಸ್, ಅರವಿಂದ ಬೆಲ್ಲದ ಹೇಳಿಕೊಂಡಿದ್ದಾರೆ. ಮುಖ್ಯಮಂತ್ರಿ ವಿರುದ್ಧ ನಿರಂತರವಾಗಿ ಆರೋಪ ಮಾಡುತ್ತಿರುವ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಮುರುಗೇಶ್ ನಿರಾಣಿ ಅವರನ್ನು ಹೈಕಮಾಂಡ್ ನಾಯಕರೇ ಪಟ್ಟಿಯಲ್ಲಿ ಸೇರಿಸಿ ಕಳುಹಿಸಿದರೂ ಆಶ್ಚರ್ಯ ಪಡುವಂತಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.

**ಮತ್ತೆ ಅಪಸ್ವರ:** ಈ ನಡುವೆ ಉಳಿದಂತೆ ಸರ್ಕಾರ ರಚನೆಯಲ್ಲಿ ಪ್ರಮುಖ ಪಾತ್ರ ವಹಿಸಿರುವ ವಿಧಾನ ಪರಿಷತ್ ಸದಸ್ಯ ಸಿ.ಪಿ. ಯೋಗೇಶ್ವರ್ ಸೇರ್ಪಡೆಗೆ ಆಸಕ್ತರಾಗಿದ್ದರೂ, ಪಕ್ಷದ ಆಂತರಿಕ ವಲಯದಲ್ಲಿ ವಿರೋಧ ವ್ಯಕ್ತವಾಗುತ್ತಿದೆ. ಸೋತವರನ್ನು ಪರಿಷತ್ ಸದಸ್ಯರನ್ನಾಗಿ ಮಾಡಿದ್ದಾಗಿದೆ. ಅವರಿಗೆ ಮಂತ್ರಿ ಸ್ಥಾನ ಕೊಡುವ ಅಗತ್ಯವಿಲ್ಲ ಎಂದು ಶಾಸಕರಾದ ಎಂ.ಪಿ. ರೇಣುಕಾಚಾರ್ಯ, ರಾಜುಗೌಡ ಮುಖ್ಯಮಂತ್ರಿ ಎದುರು ಆಗ್ರಹಿಸಿದ್ದಾರೆ ಎಂದು ತಿಳಿದು ಬಂದಿದೆ. ಆದರೆ, ಮುಖ್ಯಮಂತ್ರಿ ಅವರ ಸೇರ್ಪಡೆ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಹೇಳಿದ್ದಾರೆ ಎಂದು ತಿಳಿದು ಬಂದಿದೆ.

ಮುನಿರತ್ನ ಸೇರ್ಪಡೆಗೆ ಹೈಕಮಾಂಡ್ ಅಪಸ್ವರ ಎತ್ತಿದೆ ಎನ್ನಲಾಗುತ್ತಿದ್ದು ಆದರೆ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಾವು ಭರವಸೆ ನೀಡಿರುವುದರಿಂದ ಅವರಿಗೆ ಸಚಿವ ಸ್ಥಾನ ನೀಡುವುದಾಗಿ ಹೈಕಮಾಂಡ್ ಮುಂದೆ ಹೇಳಿದ್ದಾರೆ ಎಂದು ತಿಳಿದು ಬಂದಿದೆ. ಆದೇ ರೀತಿ ಅಬಕಾರಿ ಸಚಿವ ಎಚ್. ನಾಗೇಶ್ ವಿಷಯದಲ್ಲಿಯೂ ಹೈಕಮಾಂಡ್ ಕೈ ಬಿಡುವಂತೆ ಸೂಚನೆ ನೀಡಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಪಕ್ಷದ ತೀರ್ಮಾನಕ್ಕೆ ಬದ್ಧ. ಜಾತಿವಾರು ಲೆಕ್ಕಾಚಾರ ಪಕ್ಷದ ನಾಯಕರಿಗೆ ಗೊತ್ತಿರುತ್ತವೆ. ನಾನು ಯಾವುದೇ ರೀತಿಯ ಒತ್ತಡ ಹೇರುವುದಿಲ್ಲ.

• ಪೂರ್ಣಿಮಾ ಶ್ರೀನಿವಾಸ್, ಶಾಸಕಿ.

ನನಗೂ ಸಚಿವ ಸ್ಥಾನ ಸಿಕ್ಕರೆ ಒಳ್ಳೆಯದು. ಸರಕಾರ ನೀಡಿದ ಕೆಲಸವನ್ನು ಅಚ್ಚುಕಟ್ಟಾಗಿ ನಿಭಾಯಿಸಿ ಒಳ್ಳೆಯ ಕೆಲಸ ಮಾಡುತ್ತೇನೆ.

• ಅರವಿಂದ ಬೆಲ್ಲದ, ಶಾಸಕ

ಬಿಜೆಪಿ ವರಿಷ್ಠರು ಏನು ಯೋಚನೆ ಮಾಡಿದ್ದಾರೆ ನನಗೆ ಗೊತ್ತಿಲ್ಲ. ಸಿಎಂ ಬಗ್ಗೆ ನಂಬಿಕೆಯಿದ್ದು ಸಂಪುಟದಿಂದ ನನ್ನನ್ನು ಕೈ ಬಿಡುವುದಿಲ್ಲ ಎಂಬ ವಿಶ್ವಾಸವಿದೆ.

• ನಾಗೇಶ್, ಅಬಕಾರಿ ಸಚಿವ

## 15 ಜಿಲ್ಲೆಗಳಿಗಿಲ್ಲ ಪ್ರಾತಿನಿಧ್ಯ

ಕಲಬುರ್ಗಿ, ಯಾದಗಿರಿ, ವಿಜಯಪುರ, ಬಳ್ಳಾರಿ, ರಾಯಚೂರು, ಕೊಪ್ಪಳ, ದಾವಣಗೆರೆ, ಕೊಡಗು, ಚಾಮರಾಜನಗರ, ಉಡುಪಿ. ರಾಮನಗರ, ಬೆಂಗಳೂರು ಗ್ರಾಮಾಂತರ, ಮೈಸೂರು. ಹಾಸನ. ಚಿಕ್ಕಮಗಳೂರು

**ಸಚಿವರಿರುವ ಜಿಲ್ಲೆಗಳು:** ಬೆಂಗಳೂರು-7, ಬೆಳಗಾವಿ -4, ಬೀದರ್-1, ವಿಜಯನಗರ-1, ಬಾಗಲಕೋಟೆ-1, ಧಾರವಾಡ-1, ಗದಗ-1, ಉತ್ತರ ಕನ್ನಡ-1, ಹಾವೇರಿ-2, ಚಿತ್ರದುರ್ಗ-1, ತುಮಕೂರು-1, ಮಂಡ್ಯ-1, ಚಿಕ್ಕಬಳ್ಳಾಪುರ-1, ಕೋಲಾರ-1, ಶಿವಮೊಗ್ಗ-2 (ಸಿಎಂ ಸೇರಿ), ದಕ್ಷಿಣ ಕನ್ನಡ-1

**ಜಾತಿ ಲೆಕ್ಕಾಚಾರ:** ಲಿಂಗಾಯತ -9, ಒಕ್ಕಲಿಗ-6, ಕುರುಬ-2, ಎಸ್ಸಿ-3, ಎಸ್ಟಿ-2, ರಜಪೂತ-1, ಮರಾಠ-1, ಬ್ರಾಹ್ಮಣ-2, ಈಡಿಗ-1

## ನನ್ನ ಖಾತೆ ಬದಲಾವಣೆ ವಿಚಾರ ಗೊತ್ತಿಲ್ಲ: ಸವದಿ

ದಾವಣಗೆರೆ: ಉಪಮುಖ್ಯಮಂತ್ರಿಯಾಗಿದ್ದರೂ ನಾನೊಬ್ಬ ಸಾಮಾನ್ಯ ಕಾರ್ಯಕರ್ತ. ಸಂಪುಟ ವಿಸ್ತರಣೆ ಹಾಗೂ ನನ್ನ ಖಾತೆ ಬದಲಾವಣೆ ಬಗ್ಗೆ ನನಗೇನೂ ಗೊತ್ತಿಲ್ಲ ಎಂದು ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದರು. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟ ವಿಸ್ತರಣೆ ಹಾಗೂ ಮಂತ್ರಿ ಮಾಡುವ ಸಂಪೂರ್ಣ ಅಧಿಕಾರ ಮುಖ್ಯಮಂತ್ರಿಯವರಿಗಿದೆ. ಯಾರಿಗೆ ಸಚಿವ ಸ್ಥಾನ ಸಿಗುತ್ತದೆ, ಯಾವ ಖಾತೆ ಬದಲಾಗುತ್ತದೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಸಂಪುಟ ವಿಸ್ತರಣೆ ರಾಷ್ಟ್ರೀಯ ನಾಯಕರೊಂದಿಗೆ ಬಗ್ಗೆ ಸಿಎಂ ಚರ್ಚೆ ನಡೆಸಿದ್ದಾರೆ ಎಂಬುವಷ್ಟೇ ಗೊತ್ತು ಎಂದರು.